# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 62

ಮಾನ್ಯ ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 13/02/2023

ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವರು

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕೆಲವು ಪ್ರವಾಸಿ ತಾಣಗಳಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಪ್ರವಾಸಿ ತಾಣಗಳಲ್ಲಿ ಎಲ್ಲಾ ವಿಧದ ಪ್ಲಾಸ್ಟಿಕ್‌ನ್ನು ಕಡ್ಡಾಯವಾಗಿ ನಿಷೇಧಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಯಾವ ಕಾಲಮಿತಿಯಲ್ಲಿ ನಿಷೇಧಿಸಲಾಗುವುದು | ಪ್ರವಾಸಿ ತಾಣಗಳಲ್ಲಿ ಎಲ್ಲಾ ವಿಧದ ಪ್ಲಾಸ್ಟಿಕ್‌ನ್ನು ಕಡ್ಡಾಯವಾಗಿ ನಿಷೇಧಿಸುವ ಪ್ರಸ್ತಾವ ಸರ್ಕಾರದ ಮುಂದಿರುವುದಿಲ್ಲ.<br><br>ಪ್ರವಾಸಿ ತಾಣಗಳಲ್ಲಿ ಪ್ಲಾಸ್ಟಿಕ್ ನಿಷೇಧ ಕಾಯ್ದೆಯು ಜಾರಿಯಲ್ಲಿದೆ. ಪ್ಲಾಸ್ಟಿಕ್ ತ್ಯಾಜ್ಯಕ್ಕೆ ಸಂಬಂಧಿಸಿದಂತೆ ಅಧಿಸೂಚನೆ ಸಂಖ್ಯೆ:ಅಪಜೀ 17 ಇಪಿಸಿ 2012, ದಿನಾಂಕ |
| ಇ) | ಪ್ರವಾಸಿ ತಾಣಗಳ ಶುಚಿತ್ವ ನಿರ್ವಹಣೆಗೆ ಸರ್ಕಾರದ ವತಿಯಿಂದ ಕೈಗೊಂಡಿರುವ ಕಾರ್ಯಕ್ರಮಗಳೇನು? | 11-03-2016ರಲ್ಲಿ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಕ್ಲಿಂಗ್ ಫಿಲ್ಮ್ಸ್ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮಾಕೋಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸ್ ನಿಂದ ತಯಾರಾದಂತಹ ಮೇಲ್ಕಂಡ ವಸ್ತುಗಳ ತಯಾರಿಕೆ, ಸರಬರಾಜು, ಸಂಗ್ರಹಣೆ, ಸಾಗಾಣಿಕೆ, ಮಾರಾಟ ಮತ್ತು ವಿತರಣೆ ಮಾಡುವುದನ್ನು ರಾಜ್ಯಾದ್ಯಂತ ನಿಷೇಧಿಸಿದೆ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ರಾಜ್ಯದಲ್ಲಿ ಏಕಬಳಕೆಯ ಪ್ಲಾಸ್ಟಿಕ್ (Single Use Plastic) ಅನ್ನು ದಿನಾಂಕ 01-07-2022 ರಿಂದ ನಿಷೇಧಿಸಲಾಗಿರುತ್ತದೆ. ಈ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪ್ರವಾಸೋದ್ಯಮ ಸ್ಥಳಗಳು ಮತ್ತು ಧಾರ್ಮಿಕ ಸ್ಥಳಗಳಲ್ಲಿ ಏಕಬಳಕೆಯ ಪ್ಲಾಸ್ಟಿಕ್ (Single Use Plastic) ಯನ್ನು ನಿಷೇಧಿಸುವಂತೆ ಕಟ್ಟುನಿಟ್ಟಾದ ಆದೇಶ ನೀಡಲು ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಪ್ರವಾಸಿ ತಾಣಗಳಲ್ಲಿ ಏಕಬಳಕೆಯ ಪ್ಲಾಸ್ಟಿಕ್ ಬಳಕೆ(Single Use Plastic)ಯನ್ನು ನಿಷೇಧಿಸಿ ಶುಚಿತ್ವ ನಿರ್ವಹಣೆ ಸಂಬಂಧ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿರವರುಗಳಿಗೆ ಅಗತ್ಯ ಕ್ರಮವಹಿಸುವಂತೆ ತಿಳಿಸಲಾಗುವುದು. |

ಸಂಖ್ಯೆ: ಟಿಒಆರ್ 06 ಟಿಡಿವಿ 2023

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವರು